## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಸವಿತಾ ಸಮಾಜದ ಪಾರಂಪರಿಕ ಕಲೆಗಳಾದ ಡೋಲು ಮತ್ತು ನಾದಸ್ವರ ಸಂಗೀತ ಕಲೆಗಳನ್ನು ಪುನಃಶ್ಚೇತನಗೊಳಿಸಲು ಗುರುಶಿಷ್ಯ ಪರಂಪರೆಯ ಮಾದರಿಯಲ್ಲಿ ಸವಿತಾ ಸಮಾಜದ ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:**
1. 2015-16ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯ ಕಂಡಿಕೆ ಸಂ (233).
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆ ಸಂಖ್ಯೆ ಹಿಂವಕಇ/ತರಬೇತಿ-2/ಸಿಆರ್-1/2015-16 ದಿನಾಂಕ: 07.05.2015

********

<u>ಪ್ರಸ್ತಾವನೆ:</u>

2015-16ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳು ಮಂಡಿಸಿದ ಆಯವ್ಯಯ ಭಾಷಣದ ಕಂಡಿಕೆ (233) ರಲ್ಲಿ ಈ ಕೆಳಗಿನಂತೆ ಘೋಷಿಸಲಾಗಿದೆ.

"ಸವಿತಾ ಸಮಾಜದ ಪಾರಂಪರಿಕ ಕಲೆಗಳಾದ ಡೋಲು ಮತ್ತು ನಾದಸ್ವರ ಸಂಗೀತ ಕಲೆಗಳನ್ನು ಪುನಃಶ್ಚೇತನಗೊಳಿಸಲು ಗುರುಶಿಷ್ಯ ಪರಂಪರೆಯ ಮಾದರಿಯಲ್ಲಿ ಸಮಾಜದ ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುವುದು"

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು, ಆಯವ್ಯಯ ಘೋಷಣೆಯನ್ವಯ 2015-16ನೇ ಸಾಲಿನಿಂದ ಸವಿತಾ ಸಮಾಜದ ಪಾರಂಪರಿಕ ಕಲೆಗಳಾದ ಡೋಲು ಮತ್ತು ನಾದಸ್ವರ ಸಂಗೀತ ಕಲೆಗಳನ್ನು ಪುನಃಶ್ಚೇತನಗೊಳಿಸಲು ಗುರುಶಿಷ್ಯ ಪರಂಪರೆಯ ಮಾದರಿಯಲ್ಲಿ ಸವಿತಾ ಸಮಾಜದ ವಿದ್ಯಾರ್ಥಿಗಳಿಗೆ ತರಬೇತಿ ನೀಡುವ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲು ಸರ್ಕಾರದ ಆದೇಶದೊಂದಿಗೆ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಈ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 510 ಬಿಎಂಎಸ್ 2015, ಬೆಂಗಳೂರು, ದಿನಾಂಕ:31/08/2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2015-16ನೇ ಸಾಲಿನಿಂದ ಸವಿತಾ ಸಮಾಜದ ಪಾರಂಪರಿಕ ಕಲೆಗಳಾದ ಡೋಲು ಮತ್ತು ನಾದಸ್ವರ ಸಂಗೀತ ಕಲೆಗಳನ್ನು ಪುನಃಶ್ಚೇತನಗೊಳಿಸಲು ಗುರುಶಿಷ್ಯ ಪರಂಪರೆಯ ಮಾದರಿಯಲ್ಲಿ ಸವಿತಾ ಸಮಾಜದ ವಿದ್ಯಾರ್ಥಿಗಳಿಗೆ ತರಬೇತಿಯನ್ನು ಅನುಬಂಧದಲ್ಲಿನ ಮಾರ್ಗಸೂಚಿಗಳನ್ವಯ ನೀಡಲು ಆದೇಶಿಸಿದೆ.

ಈ ಕಾರ್ಯಕ್ರಮಕ್ಕೆ ತಗಲುವ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮ ರಾಜ್ಯವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-277-2-37 ರಡಿ ಒದಗಿಸಿರುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 730 ವೆಚ್ಚ-3/2015 ದಿನಾಂಕ: 25/08/2015ರಲ್ಲಿ ಹಾಗೂ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2013 ದಿನಾಂಕ:10-5-2013ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್. ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

## ಸರ್ಕಾರದ ಆದೇಶ ಸಂಖ್ಯೆ ಹಿಂವಕ 510 ಬಿಎಂಎಸ್ 2015 ದಿನಾಂಕ: 31/08/2015ರ

## ಅನುಬಂಧ

## ಸವಿತಾ ಸಮಾಜದ ಪಾರಂಪರಿಕ ಕಲೆಗಳ ಪುನಃಶ್ಚೇತನ ಕಾರ್ಯಕ್ರಮದ ಮಾರ್ಗಸೂಚಿಗಳು

**I. ಯೋಜನೆಯ ಉದ್ದೇಶ:-**

ಹಿಂದುಳಿದ ವರ್ಗಗಳ ಪ್ರವರ್ಗ-2 (ಎ) ಯ ಸವಿತಾ ಸಮಾಜದ ಪಾರಂಪರಿಕ ಕಲೆಗಳಾದ ಡೋಲು ಮತ್ತು ನಾದಸ್ವರ ಸಂಗೀತ ಕಲೆಗಳು ನಶಿಸಿ ಹೋಗುತ್ತಿದ್ದು, ಗುರುಶಿಷ್ಯ ಪರಂಪರೆಯ ಮಾದರಿಯಲ್ಲಿ ಸವಿತಾ ಸಮಾಜದ ವಿದ್ಯಾರ್ಥಿಗಳಿಗೆ ತರಬೇತಿ ನೀಡುವ ಮೂಲಕ ಈ ಕಲೆಗಳನ್ನು ಪುನಃಶ್ಚೇತನಗೊಳಿಸುವುದು.

**II. ತರಬೇತಿ ಪಡೆಯಲು ನಿಗದಿಪಡಿಸಿರುವ ಅರ್ಹತೆಗಳು:-**

1. ಹಿಂದುಳಿದ ವರ್ಗಗಳ ಪ್ರವರ್ಗ-2ಎ ರಲ್ಲಿ ಬರುವ ಸವಿತಾ ಸಮಾಜ ಅಥವಾ ಅದರ ಉಪಜಾತಿಗಳಿಗೆ ಸೇರಿರಬೇಕು.
2. ಕನಿಷ್ಠ ವಯೋಮಿತಿ 10 ವರ್ಷ ಹಾಗೂ ಗರಿಷ್ಠ ವಯೋಮಿತಿ 15 ವರ್ಷ. (ಒಂದು ವೇಳೆ, ಅಧ್ಯಯನ ಮಾಡುತ್ತಿರುವ 15 ವರ್ಷ ವಯೋಮಿತಿಯೊಳಗಿನ ವಿದ್ಯಾರ್ಥಿಗಳು ದೊರೆಯದ ಪಕ್ಷದಲ್ಲಿ ಮಾತ್ರ 18 ವರ್ಷದವರೆಗಿನ ಮಕ್ಕಳನ್ನು ಸ್ವಲ್ಪಮಟ್ಟಿಗೆ ಸೇರಿಸಲು ಅವಕಾಶ ನೀಡುವುದು).
3. ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ವಾರ್ಷಿಕ ಆದಾಯ ಮಿತಿ – ರೂ.2 ಲಕ್ಷಗಳು.

**III. ತರಬೇತಿ ಕಾರ್ಯಕ್ರಮದ ಅನುಷ್ಠಾನ:**

ಮೈಸೂರಿನ ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾಲಯದ ಮೂಲಕ ಸಂಗೀತ ಕಲೆಗಳಾದ ಡೋಲು ಮತ್ತು ನಾದಸ್ವರದ ತರಬೇತಿ ನೀಡಲಿದ್ದು, ಸಂಗೀತ ವಿಶ್ವವಿದ್ಯಾಲಯವು ನಿರ್ವಹಿಸಬೇಕಾದ ಕಾರ್ಯಗಳು.

ಅ) ಡೋಲು ಮತ್ತು ನಾದಸ್ವರ ಶಿಕ್ಷಣ ನೀಡಲು ಅಗತ್ಯವಿರುವ ಪ್ರಸ್ತಾವನೆಯನ್ನು ಪ್ರತಿ ಆರ್ಥಿಕ ವರ್ಷದ ಆರಂಭದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾಲಯ, ಮೈಸೂರು ಇವರು ಸಲ್ಲಿಸುವುದು.

ಆ) ಡೋಲು ಮತ್ತು ನಾದಸ್ವರ ಸಂಗೀತ ಶಿಕ್ಷಣಕ್ಕೆ ಪಠ್ಯಕ್ರಮ ರೂಪಿಸುವುದು ಹಾಗೂ ತರಬೇತಿಯ ಅವಧಿಯನ್ನು ನಿಗದಿಪಡಿಸುವುದು.

ಇ) ಡೋಲು ಮತ್ತು ನಾದಸ್ವರ ಸಂಗೀತ ಶಿಕ್ಷಕರ ನೇಮಕಾತಿ ಹಾಗೂ ಇವರಿಗೆ ಗೌರವಧನ ಪಾವತಿ.

ಈ) ಡೋಲು ಮತ್ತು ನಾದಸ್ವರ ಸಂಗೀತ ಶಿಕ್ಷಣದ ವಾರ್ಷಿಕ ಪರೀಕ್ಷೆಗಳನ್ನು ನಡೆಸುವುದು, ಮೌಲ್ಯಮಾಪನ ಮಾಡುವುದು.

ಉ) ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರಗಳ ವಿತರಣೆ ಮಾಡುವುದು.

ಊ) ಸಂಗೀತ ತರಬೇತಿಗೆ ವಿಶೇಷ ಸಮವಸ್ತ್ರ ಎರಡು ಜೊತೆ ಹಾಗೂ ಡೋಲು/ನಾದಸ್ವರ ಸಂಗೀತ ಉಪಕರಣಗಳನ್ನು ಖರೀದಿಸಲು ವಾಸ್ತವ ವೆಚ್ಚದ ದರದಲ್ಲಿ ಧನ ಸಹಾಯ ನೀಡುವುದು.

ಆರ್. ಕಲ್ಲೇಶ್

**IV ತರಬೇತಿ ಕೇಂದ್ರದ ಸ್ಥಾಪನೆ:-**

1. ಪ್ರಾರಂಭಿಕ ಹಂತದಲ್ಲಿ ಸವಿತಾ ಸಮಾಜದ 30 ಬಾಲಕರಿಗೆ ಡೋಲು/ನಾದಸ್ವರ ಸಂಗೀತ ಕಲೆಯಲ್ಲಿ ತರಬೇತಿಯನ್ನು ನೀಡಲು ತರಬೇತಿ ಕೇಂದ್ರವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ, ದೇವನಹಳ್ಳಿ ಟೌನ್ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ತರಬೇತಿ ಕೇಂದ್ರವನ್ನು ಸ್ಥಾಪಿಸುವುದು.
2. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಯು ಸದರಿ ತರಬೇತಿ ಕೇಂದ್ರದ ನಿರ್ವಹಣೆಯ ಉಸ್ತುವಾರಿಯನ್ನು ನಿರ್ವಹಿಸುವುದು.

**V ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿಗಳಿಗೆ ಒದಗಿಸಲಾಗುವ ಸೌಲಭ್ಯಗಳ ವಿವರಗಳು:-**

1. ಉಚಿತ ಊಟ ಮತ್ತು ವಸತಿ ವ್ಯವಸ್ಥೆ/ವಸತಿಯೇತರ ವಿದ್ಯಾರ್ಥಿಗಳಿಗೆ ಅವಕಾಶ.
2. ಸ್ಥಳೀಯ ಸರ್ಕಾರಿ ಶಾಲೆಗಳಲ್ಲಿ ಉಚಿತ ಶಿಕ್ಷಣ.
3. ಮೆಟ್ರಿಕ್ ಪೂರ್ವ ವಸತಿ ನಿಲಯಗಳಲ್ಲಿ ಒದಗಿಸಲಾಗುವಂತೆ, ಸಮವಸ್ತ್ರ, ಪಠ್ಯಪುಸ್ತಕ ಮತ್ತು ಲೇಖನ ಸಾಮಾಗ್ರಿ, ಜಮಖಾನ, ಹೊದಿಕೆ ಕ್ಷೌರದ ವೆಚ್ಚ ಇತ್ಯಾದಿಗಳನ್ನು ಒದಗಿಸುವುದು.
4. ಪ್ರತಿ ವಿದ್ಯಾರ್ಥಿಗೆ ಮಾಸಿಕ ನಿರ್ವಹಣೆ ವೆಚ್ಚ ರೂ.1500/- ಹಾಗೂ ತರಬೇತಿ ಭತ್ಯೆ ರೂ.500/- ರಂತೆ ಒಟ್ಟು ರೂ.2000/- ದಂತೆ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಭರಿಸುವುದು.

**VI ತರಬೇತಿಯ ಮೇಲ್ವಿಚಾರಣೆಗೆ ಉಸ್ತುವಾರಿ ಸಮಿತಿ:**

ಡೋಲು ಮತ್ತು ನಾದಸ್ವರ ಸಂಗೀತ ತರಬೇತಿಯ ಮೇಲ್ವಿಚಾರಣೆಗೆ ಈ ಕೆಳಗಿನಂತೆ ಉಸ್ತುವಾರಿ ಸಮಿತಯನ್ನು ರಚಿಸಿದ್ದು, ಸಮಿತಿಯು ಪ್ರತಿ 3 ತಿಂಗಳಿಗೊಮ್ಮೆ ಸಭೆ ಸೇರಿ ತರಬೇತಿ ಕಾರ್ಯಕ್ರಮದ ಪ್ರಗತಿಯನ್ನು ಪರಿಶೀಲಿಸುವುದು.

| ಕ್ರ.ಸಂ | ಉಸ್ತುವಾರಿ ಸಮಿತಿ ವಿವರ | ಅಧ್ಯಕ್ಷರು/ಸದಸ್ಯರು |
|---|---|---|
| 1. | ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಅಧ್ಯಕ್ಷರು |
| 2. | ಉಪಕುಲಪತಿಗಳು, ಡಾ|| ಗಂಗೂಬಾಯಿ ಹಾನಗಲ್ ವಿಶ್ವವಿದ್ಯಾಲಯ, ಮೈಸೂರು | ಸದಸ್ಯರು |
| 3. | ಪ್ರೊ. ನರಸಿಂಹಯ್ಯ, ಸವಿತಾ ಸಮಾಜದ ಮುಖಂಡರು | ಸದಸ್ಯರು |
| 4. | ಜಂಟಿ ನಿರ್ದೇಶಕರು (ಅ.ಕೋಶ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಸದಸ್ಯರು |
| 4 | ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ | ಸದಸ್ಯ ಕಾರ್ಯದರ್ಶಿ |

**VII ತರಬೇತಿ ಕೇಂದ್ರದ ನಿರ್ವಹಣೆ ಹಾಗೂ ತರಬೇತಿ ಕಾರ್ಯಕ್ರಮಕ್ಕಾಗಿ ಅನುದಾನ ಪಾವತಿ ವಿಧಾನ:**

1. ತರಬೇತಿ ಕೇಂದ್ರದ ನಿರ್ವಹಣೆಗೆ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ನಿರ್ವಹಣಾ ವೆಚ್ಚ ದರದಲ್ಲಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರಿಗೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಅನುದಾನ ಬಿಡುಗಡೆ ಮಾಡುವುದು.
2. ತರಬೇತಿ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಶಿಕ್ಷಕರಿಗೆ ಗೌರವ ಧನ, ಪಠ್ಯ ಪುಸ್ತಕ, ವಿಶೇಷ ಸಮವಸ್ತ್ರ ವೆಚ್ಚ, ವಾದ್ಯೋಪಕರಣಗಳ ಧನ ಸಹಾಯದ ಮೊತ್ತ ಇತ್ಯಾದಿಗಳಿಗಾಗಿ ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವ ವಿದ್ಯಾಲಯವು ಸಲ್ಲಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು ಅನುದಾನವನ್ನು ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಇವರಿಗೆ ಬಿಡುಗಡೆ ಮಾಡುವುದು.
3. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ, ಮೈಸೂರು ಜಿಲ್ಲೆ ಇವರು ಉಪ ಕುಲಪತಿಗಳು, ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾಲಯ, ಮೈಸೂರು ಇವರ ಹೆಸರಿನಲ್ಲಿ ಸ್ವೀಕರ್ತನ ರಶೀದಿಯಲ್ಲಿ ಬಿಲ್ ತಯಾರಿಸಿ, ಜಿಲ್ಲಾಧಿಕಾರಿಗಳ ಮೇಲುಸಹಿಯೊಂದಿಗೆ ಅನುದಾನವನ್ನು ಸೆಳೆದು ಸಂಗೀತ ವಿಶ್ವವಿದ್ಯಾಲಯಕ್ಕೆ ಪಾವತಿಸುವುದು.
4. ಸಂಗೀತ ಕಲೆಗಳಲ್ಲಿ ತರಬೇತಿ ನೀಡಲು ತಗಲುವ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತರಬೇತಿ ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮ ರಾಜ್ಯ ವಲಯ ಯೋಜನೆ ಲೆಕ್ಕ ಶೀರ್ಷಿಕೆ 2225-03-277-2-37 ರಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

(ಆರ್. ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.